**ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ಗಳ ನ್ಯಾಯಾಲಯ, ವಿಜಯನಗರ ಜಿಲ್ಲೆ, ಹೊಸಪೇಟೆ.**

**ಸಿಸಿ ನಂಬರ್ 1866/2025**

**ಸಿ ಡಬ್ಲ್ಯೂ -2**

**ಪಿ ಡಬ್ಲ್ಯೂ -2**

| | |
|---|---|
| **ಸಾಕ್ಷಿಯ ಹೆಸರು -** | **ಸೋಮಪ್ಪ** |
| **ತಂದೆಯ ಹೆಸರು -** | **ದೊಡ್ಡ ಮಲಿಯಪ್ಪ** |
| **ವಯಸ್ಸು -** | 66 **ವರ್ಷಗಳು** |
| **ಉದ್ಯೋಗ -** | **ಸಮಾಜ ಸೇವಕ** |
| **ವಾಸಸ್ಥಳ -** | **ಹೊಸಪೇಟೆ** |

**ಸಾಕ್ಷಿಯನ್ನು ದಿನಾಂಕಃ 18-03-2026 ರಂದು ಪ್ರಾಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎ. ಪಿ. ಪಿ. ಅವರಿಂದ**

ಈಗ ನಾನು ನೋಡುತ್ತಿರುವ ದಾಖಲೆಯಲ್ಲಿನ ಸಹಿ ನನ್ನದೇ ಆಗಿರುತ್ತದೆ. ಸಾಕ್ಷಿ ಸ್ಥಳ ಪಂಚನಾಮೆಯಲ್ಲಿನ ಸಹಿ ನೋಡಿ ಗುರುತಿಸಿರುತ್ತಾರೆ. ಸದರಿ ಪಂಚನಾಮೆಯನ್ನು ಈಗಾಗಲೇ ನಿಪಿಃ 2 ಎಂದು ಗುರುತಿಸಲಾಗಿದೆ, ಸಾಕ್ಷಿಯ ಸಹಿಯನ್ನು ನಿಪಿಃ 2(ಬಿ) ಎಂದು ಗುರುತಿಸಲಾಯಿತು.

ಸದರಿ ಸಹಿಯನ್ನು ಈಗ್ಗೆ 1 ವರ್ಷದ ಹಿಂದೆ ಹೊಸಪೇಟೆಯ ಮೆಹಬೂಬ್ ನಗರದಲ್ಲಿ 22 ನೇ ವಾರ್ಡ್‌ನಲ್ಲಿ ಮಾಡಿದ್ದೆ. ಪೋಲಿಸರು ಚಾಸಾ -1 ರವರ ಬಂಗಾರದ ಸರ ಕಳ್ಳತನ ಆದ ಬಗ್ಗೆ ಸ್ಥಳ ಪಂಚನಾಮೆ ಮಾಡಿದಾಗ ಸದರಿ ಸಹಿಯನ್ನು ಮಾಡಿರುತ್ತೇನೆ. ಪಂಚನಾಮೆ ಕಾಲಕ್ಕೆ ನಾನು, ಚಾಸಾ -1 ಮತ್ತು 3 ರವರು ಹಾಜರಿದ್ದೇವು. ಸದರಿ ಪಂಚನಾಮೆಯನ್ನು ಸಂಜೆ 5.30 ರಿಂದ 6.00 ಗಂಟೆಯ ವರೆಗೆ ಮಾಡಿರುತ್ತಾರೆ.

ಕಚ್ಚಾ ನಕಾಶೆಯಲ್ಲಿನ ಸಹಿ ನನ್ನದೇ ಆಗಿರುತ್ತದೆ. ಸಾಕ್ಷಿ ಕಚ್ಚಾ ನಕಾಶೆಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿಃ 3 ಎಂದು

ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿಃ 3(ಬಿ) ಎಂದು ಗುರುತಿಸಲಾಯಿತು. ಕಚ್ಚಾ ನಕಾಶೆಯಲ್ಲಿ ಸ್ಥಳದಲ್ಲಿಯೇ ಸಹಿ ಮಾಡಿರುತ್ತೇನೆ.

ಈಗ ನಾನು ನೋಡುತ್ತಿರುವ ಪೋಟೋದಲ್ಲಿನ ವ್ಯಕ್ತಿ ನಾನೇ ಇರುತ್ತೇನೆ. ಸದರಿ ಪೋಟೋವನ್ನು ನಿಪಿಃ 4 ಎಂದು ಗುರುತಿಸಲಾಗಿದೆ.

**ಪಾಟೀ ಸವಾಲು 1 ನೇ ಆರೋಪಿ ಪರ ಶ್ರೀ ಬಿ ಎಂ ವಕೀಲರಿಂದಃ**

ಸದರಿ ಪ್ರದೇಶದಲ್ಲಿ ಯಾವುದೇ ಘಟನೆಯಾದರೂ ಪಂಚನಾಮೆ ಮಾಡಲು ಪೋಲಿಸರು ನನ್ನನ್ನೇ ಕರೆಯುತ್ತಾರೆ ಅಂದರೆ ಸರಿ. ನಾನು 7-8 ಪ್ರಕರಣಗಳಲ್ಲಿ ಪಂಚನಾಗಿರುತ್ತೇನೆ. ಪೋಲಿಸರು ಪಂಚನಾಮೆಗೆ ಬರುವಂತೆ ಮೌಖಿಕವಾಗಿಯೇ ಕರೆದಿದ್ದರು, ನೋಟಿಸ್ ಕೊಟ್ಟಿರಲಿಲ್ಲ. ಚಾಸಾ -1 ನನ್ನ ಮನೆ ಇರುವ ಪ್ರದೇಶಯಲ್ಲಿಯೇ ಇರುತ್ತಾರೆ ಅಂದರೆಸರಿ. ನಿಪಿಃ 2 ಅನ್ನು ಬರೆಯಲು ಯಾರು ಮಾಹಿತಿಯನ್ನು ನೀಡಿದರು ಎಂದು ನನಗೆ ಗೊತ್ತಿಲ್ಲ ಅಂದರೆ ಸರಿ. ನಿಪಿಃ 3 ಅನುನ ಯಾರು ಬಿಡಿಸಿರುತ್ತಾರೆ ಎಂದು ನನಗೆ ಗೊತ್ತಿಲ್ಲ ಅಂದರೆ ಸರಿ. ನಿಪಿಃ 4 ರ ಪೊಟೋ ಯಾರು ತೆಗೆದರು ಎಂದು ನನಗೆ ಗೊತ್ತಿಲ್ಲ ಅಂದರೆ ಸರಿ. ಪೋಲಿಸರು ಹೇಳಿದ್ದರಿಂದ ಪಂಚನಾಮೆಗೆ ಸಹಿ ಮಾಡಿರುತ್ತೇನೆ ಅಂದರೆ ಸರಿ. ಪ್ರಕರಣದ ಮಾಹಿತಿ ಇಲ್ಲದಿದ್ದರೂ ಚಾಸಾ -1 ರವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

**ಪಾಟೀ ಸವಾಲು 2 ನೇ ಆರೋಪಿ ಪರ ಶ್ರೀ ಯು ಜಿ ವಕೀಲರಿಂದಃ** ಇಲ್ಲಾ

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು ಹಾಗೂ
ಜೆ.ಎಂ.ಎಫ್.ಸಿ., ವಿಜಯನಗರ ಜಿಲ್ಲೆ, ಹೊಸಪೇಟೆ.